ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿಸಿ. ಸಂಖ್ಯೆ: 80/2023**

ಪ್ರ.ವ.ಬೋ.ತಾಃ 29-01-2026

ಚಾಸಾಃ 11 ಫಾಸಾಃ 9

| | |
|---|---|
| ಸಾಕ್ಷಿಯ ಹೆಸರು | ಪಿ.ಎಂ. ಅಮ್ಮಣ್ಣಿಗಿ |
| ತಂದೆ/ಗಂಡನ ಹೆಸರು | ಮೀರಾ ಸಾಬ್ |
| ವಯಸ್ಸು | 29 ವರ್ಷ |
| ವೃತ್ತಿ | ಪಿ.ಎಸ್.ಐ., ತುಮಕೂರು<br>ಸಿ.ಇ.ಎನ್. ಪೊಲೀಸ್ ಠಾಣೆ |
| ವಾಸ | ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು ದಿಃ01.11.2023 ರಿಂದ 04.11.2025 ರವರೆಗೆ ಮಿಡಿಗೇಶಿ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕಃ 18.11.2023 ರಂದು ಈ ಕೇಸಿನ ಕಡತವನ್ನು ಚಾಸಾ.10 ರವರಿಂದ ಪಡೆದು ತನಿಖೆಯನ್ನು ಮುಂದುವರೆಸಿ, ಚಾಸಾ.2 ಮತ್ತು 3 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿಃ 21.11.2023 ರಂದು ಚಾಸಾ.4 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿಃ 24.11.2023 ರಂದು ಚಾಸಾ.8 ರವರಿಂದ ಘಟನಾ ಸ್ಥಳಕ್ಕೆ ಸಂಬಂಧಪಟ್ಟ ಪಹಣಿಯನ್ನು ಪಡೆದುಕೊಂಡಿರುತ್ತೇನೆ. ಆ ಪಹಣಿಯನ್ನು ಈಗ

ನೋಡುತ್ತಿದ್ದು, ಅದನ್ನು ನಿಪಿ.5 ಎಂದು, ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.1ರವರನ್ನು ಮಾನ್ಯ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ ದಂಡ ಪ್ರಕ್ರಿಯಾ ಸಂಹಿತೆ 164 ರ ಅಡಿಯಲ್ಲಿ ಹೇಳಿಕೆ ಮಾಡಿಸಿರುತ್ತೇನೆ. ಆ ದಂಡ ಪ್ರಕ್ರಿಯಾ ಸಂಹಿತೆ 164 ರ ಹೇಳಿಕೆಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು.

ದಿಃ 01.12.2023 ರಂದು ಚಾಸಾ.1ರವರ ಗಾಯ ಪ್ರಮಾಣ ಪತ್ರವನ್ನು ಮಧುಗಿರಿ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ. ಆ ಗಾಯ ಪ್ರಮಾಣ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ.3 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.3(ಬಿ) ಎಂದು ಗುರುತಿಸಲಾಯಿತು. 1ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಈ ದಿನ 2ನೇ ಆರೋಪಿ ಗೈರುಹಾಜರಾಗಿದ್ದು, 2ನೇ ಆರೋಪಿಯ ಗುರುತಿಸುವಿಕೆಗೆ ಯಾವುದೇ ತಕರಾರು ಇಲ್ಲ ಎಂದು ಕೋರಿ ಅವರ ಹಾಜರಾತಿಗೆ ವಿನಾಯಿತಿ ಅರ್ಜಿ ಸಲ್ಲಿಸಿರುತ್ತಾರೆ. ಅದೇ ದಿನ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ಘನ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ– ಆರೋಪಿತರ ಪರವಾಗಿಃ ಶ್ರೀ. ಹೆಚ್.ವಿ.ಎಂ. ವಕೀಲರ ಪರವಾಗಿ ಶ್ರೀ ಆರ್. ಆರ್. ವಕೀಲರಿಂದಃ–**

ನಾನು ಸಾಕ್ಷಿದಾರರ ಹೇಳಿಕೆಗಳನ್ನು ಠಾಣೆಯಲ್ಲಿಯೇ ಮಾಡಿಕೊಂಡಿರುತ್ತೇನೆ. ಯಾವುದೇ ಸಾಕ್ಷಿದಾರರು ನನ್ನ ಮುಂದೆ ಹೇಳಿಕೆಗಳನ್ನು ನೀಡಿಲ್ಲ ಎಂದರೆ ಸರಿಯಲ್ಲ.

ಸಾಕ್ಷಿದಾರರ ಹೇಳಿಕೆಗಳನ್ನು ಈ ಕೇಸಿಗೋಸ್ಕರ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನಮ್ಮ ಸಿಬ್ಬಂದಿಗಳು ಚಾಸಾ.1 ರವರು ನಾವು ಹೇಳಿದಂತೆ ಮಾನ್ಯ ನ್ಯಾಯಾಧೀಶರ ಮುಂದೆ ಹೇಳಬೇಕೆಂದು ಹೇಳಿ ಕಳುಹಿಸಿರುತ್ತೇವೆ ಎಂದರೆ ಸರಿಯಲ್ಲ. ನಾನು ಈ ಕೇಸಿಗೆ ಸಂಬಂಧಪಟ್ಟಂತೆ ಸರಿಯಾದ ತನಿಖೆ ನಡೆಸದೇ ಚಾಸಾ.1 ರವರಿಗೆ ಸಹಾಯ ಮಾಡಲು ಆರೋಪಿತರ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ